ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1234
ಸದಸ್ಯರ ಹೆಸರು	:	ಶ್ರೀ ಎಸ್.ಎಲ್. ಧರ್ಮೇಗೌಡ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ	:	21.12.2018
ಉತ್ತರಿಸುವ ಸಚಿವರು	:	ಮಾನ್ಯ ಪೌರಾಡಳಿತ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ಚಿಕ್ಕಮಗಳೂರು ಜಿಲ್ಲೆಯಲ್ಲಿರುವ ಮೂಡಿಗೆರೆ ಪಟ್ಟಣ ಪಂಚಾಯಿತಿಯನ್ನು ಪುರಸಭೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಹಂತದಲ್ಲಿದೆಯೇ? ಹಾಗಿದ್ದಲ್ಲಿ ಅದು ಯಾವ ಹಂತದಲ್ಲಿದೆ?	ಚಿಕ್ಕಮಗಳೂರು ಜಿಲ್ಲೆಯಲ್ಲಿರುವ ಮೂಡಿಗೆರೆ ಪಟ್ಟಣ ಪಂಚಾಯಿತಿಯನ್ನು ಪುರಸಭೆಯನ್ನಾಗಿ ಮೇಲ್ದರ್ಜೆಗೇರಿಸುವ ಕುರಿತು ಯಾವುದೇ ಪ್ರಸ್ತಾವನೆ ಇರುವುದಿಲ್ಲ.
(ಆ)	ಮೂಡಿಗೆರೆ ಪಟ್ಟಣ ಪಂಚಾಯಿತಿಯನ್ನು ಪುರಸಭೆಯನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರಕ್ಕಿರುವ ತೊಂದರೆಗಳೇನು?	ಮೂಡಿಗೆರೆ ಪಟ್ಟಣ ಪಂಚಾಯಿತಿಯನ್ನು ಪುರಸಭೆಯನ್ನಾಗಿ ಮೇಲ್ದರ್ಜೆಗೇರಿಸುವ ಕುರಿತು ಪೌರಾಡಳಿತ ನಿರ್ದೇಶನಾಲಯದಿಂದ ಸೂಕ್ತ ಪ್ರಸ್ತಾವನೆ ಬಂದಲ್ಲಿ ನಿಯಮಾನುಸಾರ ಕ್ರಮ ವಹಿಸಲಾಗುವುದು.
(ಇ)	ಮೂಡಿಗೆರೆ ಕನಿಷ್ಠ 10 ಕಿ.ಮೀ ವ್ಯಾಪ್ತಿಯಲ್ಲಿರುವಂತಹ ಗ್ರಾಮ ಪಂಚಾಯಿತಿಗಳು ಯಾವುವು? ಅವುಗಳ ಜನಸಂಖ್ಯೆ ಎಷ್ಟು? (ಗ್ರಾಮವಾರು ಹಾಗೂ ಗ್ರಾಮ ಪಂಚಾಯಿತಿ ಮತ್ತು ಮೂಡಿಗೆರೆಗೆ ಗ್ರಾಮದಿಂದ ಇರುವಂತಹ ದೂರ ಇವುಗಳ ಪೂರ್ಣ ಮಾಹಿತಿ ನೀಡುವುದು). ಕನಿಷ್ಠ ದೂರದಲ್ಲಿರುವ ಗ್ರಾಮಗಳನ್ನು ಪಟ್ಟಣ ಪಂಚಾಯಿತಿ ವ್ಯಾಪ್ತಿಗೆ ಸೇರಿಸಿಕೊಳ್ಳಬಹುದೇ? ಹಾಗಿದ್ದಲ್ಲಿ ಎಷ್ಟು ಗ್ರಾಮಗಳನ್ನು ಪಟ್ಟಣ ಪಂಚಾಯಿತಿಗೆ ಸೇರಿಸಲಾಗುವುದು? (ಮಾಹಿತಿ ನೀಡುವುದು).	ಮೂಡಿಗೆರೆಗೆ ಕನಿಷ್ಠ 10 ಕಿ.ಮೀ. ವ್ಯಾಪ್ತಿಯಲ್ಲಿರುವಂತಹ ಗ್ರಾಮ ಪಂಚಾಯಿತಿಗಳ ವಿವರಗಳು ಈ ಕೆಳಕಂಡಂತೆ ಇರುತ್ತವೆ.

ಕ್ರ.ಸಂ	ಗ್ರಾಮಗಳ ವಿವರ	ಗ್ರಾಮ ಪಂಚಾಯಿತಿ	ದೂರ ಕಿ.ಮೀ.	ಜನಸಂಖ್ಯೆ
1	ಹೆಸಗಲ್	ಹೆಸಗಲ್	1.5	3237
2	ಬಿಳಗುಳ	ಹೆಸಗಲ್	2.0	3299
3	ಹಳೇ ಮೂಡಿಗೆರೆ	ಹಳೇ ಮೂಡಿಗೆರೆ	2.0	5288
4	ಲೋಕವಳ್ಳಿ	ಹಳೇ ಮೂಡಿಗೆರೆ	4.0	451
5	ಲೋಕವಳ್ಳಿ ಎಸ್ಟೇಟ್	ಹಳೇ ಮೂಡಿಗೆರೆ	2.0	304
6	ಮುತ್ತಿಗೆಪುರ	ಹಳೇ ಮೂಡಿಗೆರೆ	4.0	472
7	ಬೀಜುವಳ್ಳಿ	ಹಳೇ ಮೂಡಿಗೆರೆ	2.0	332
8	ಬಿದರಹಳ್ಳಿ	ಬಿದರಹಳ್ಳಿ	3.0	1517
9	ಹಳೇಕೋಟೆ	ಬಿದರಹಳ್ಳಿ	3.0	1543

		ಕರ್ನಾಟಕ ಪುರಸಭೆಗಳ ಅಧಿನಿಯಮ 1964 ರ ಕಲಂ 4 ರನ್ವಯ ನಗರ ಪ್ರದೇಶಗಳಿಗೆ ಹೊಂದಿಕೊಂಡಿರುವ ಯಾವುದೇ ಸ್ಥಳೀಯ ಪ್ರದೇಶವನ್ನು ನಗರ ಪ್ರದೇಶಕ್ಕೆ ಗ್ರಾಮಗಳನ್ನು ಸೇರಿಸಿಕೊಳ್ಳಲು ಅವಕಾಶವಿರುತ್ತದೆ. ಅದರಂತೆ ಮೂಡಿಗೆರೆ ಪಟ್ಟಣಕ್ಕೆ ಕನಿಷ್ಠ ದೂರದಲ್ಲಿರುವ ಗ್ರಾಮಗಳನ್ನು ಸೇರಿಸಿ ಕೊಳ್ಳಬಹುದಾಗಿದೆ. ಈ ಕುರಿತು ಸಂಬಂಧಿಸಿದ ಪಟ್ಟಣ ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿಗಳ ಠರಾವು/ಸಹಮತಿ ಅವಶ್ಯಕತೆ ಇರುತ್ತದೆ.
(ಈ)	ಪಟ್ಟಣ ಪಂಚಾಯಿತಿಯನ್ನು ಪುರಸಭೆಯನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ನಿಗದಿಪಡಿಸಿರುವ ಮಾನದಂಡಗಳೇನು?	ಪಟ್ಟಣ ಪಂಚಾಯಿತಿಯನ್ನು ಪುರಸಭೆಯನ್ನಾಗಿ ಮೇಲ್ದರ್ಜೆಗೇರಿಸಲು ಕರ್ನಾಟಕ ಪುರಸಭೆಗಳ ಅಧಿನಿಯಮ 1964ರ ಕಲಂ 3(1), 3(2) ಮತ್ತು 9 ಗಳನ್ವಯ ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಲಾಗುವುದು. 1. ಆ ಪಟ್ಟಣ ಪಂಚಾಯಿತಿಯ ಪ್ರದೇಶದ ಜನಸಂಖ್ಯೆ 20,000 ಕ್ಕೆ ಕಡಿಮೆ ಇಲ್ಲದಂತೆ ಹಾಗೂ 50,000 ಕ್ಕೆ ಹೆಚ್ಚಿಲ್ಲದಂತಿರಬೇಕು, 2. ಅಂತಹ ಪ್ರದೇಶದ ಜನಸಂಖ್ಯೆಯ ಜನಸಾಂದ್ರತೆಯು ಆ ಪ್ರದೇಶದ ಒಂದು ಚದುರ ಕಿ.ಮೀ. ವಿಸ್ತೀರ್ಣಕ್ಕೆ 1500 ಕ್ಕಿಂತ ಕಡಿಮೆ ಇಲ್ಲದಿರುವುದು, 3. ಹಿಂದಿನ ನಿಕಟಪೂರ್ವ ಜನಗಣತಿಯಲ್ಲಿ ಅಂತಹ ಪ್ರದೇಶದಿಂದ ಸ್ಥಳೀಯ ಆಡಳಿತಕ್ಕಾಗಿ ತೆರಿಗೆ ಮತ್ತು ತೆರಿಗೆಯಲ್ಲದ ಇತರ ಸಂಪನ್ಮೂಲಗಳಿಂದ ಉತ್ಪಾದಿತವಾದ ರಾಜಸ್ವ ವಾರ್ಷಿಕ ಒಂಬತ್ತು ಲಕ್ಷ ಅಥವಾ ವಾರ್ಷಿಕ ತಲಾ ಒಬ್ಬರಿಗೆ 45 ರೂಪಾಯಿಗಳ ದರದಂತೆ ಲೆಕ್ಕಹಾಕಲಾದ ಮೊತ್ತ ಇವೆರಡರಲ್ಲಿ ಯಾವುದು ಹೆಚ್ಚೋ ಆ ಮೊತ್ತಕ್ಕಿಂತ ಕಡಿಮೆ ಇರದ ಹೊರತು, 4. ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗಾವಕಾಶಗಳ ಶೇಕಡಾವಾರು ಪ್ರಮಾಣವು ಒಟ್ಟು ಉದ್ಯೋಗದ ಪ್ರಮಾಣಕ್ಕಿಂತ ಶೇ.50 ಕ್ಕಿಂತ ಕಡಿಮೆ ಇಲ್ಲದಿರುವುದು.
(ಉ)	ಪ್ರಸಕ್ತ ಸಾಲಿನಲ್ಲಿ ಮೂಡಿಗೆರೆ ಪಟ್ಟಣ ಪಂಚಾಯಿತಿಯನ್ನು ಪುರಸಭೆಯನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? ಹಾಗಿದ್ದಲ್ಲಿ, ಯಾವ ರೀತಿ ಕ್ರಮ ವಹಿಸಲಾಗುವುದು? (ಮಾಹಿತಿ ನೀಡುವುದು).	ಪೌರಾಡಳಿತ ನಿರ್ದೇಶನಾಲಯದಿಂದ ಮೂಡಿಗೆರೆ ಪಟ್ಟಣ ಪಂಚಾಯಿತಿಯನ್ನು ಪುರಸಭೆಯನ್ನಾಗಿ ಮೇಲ್ದರ್ಜೆಗೇರಿಸುವ ಕುರಿತು ಕರ್ನಾಟಕ ಪುರಸಭೆಗಳ ಅಧಿನಿಯಮ 1964 ರ ನಿಯಮಗಳಡಿ ಸೂಕ್ತ ಪ್ರಸ್ತಾವನೆ ಬಂದಲ್ಲಿ ನಿಯಮಾನುಸಾರ ಕ್ರಮ ವಹಿಸಲಾಗುವುದು.

ಸಂಖ್ಯೆ: ನಅಇ 37 ಎಲ್‌ಸಿಕ್ಯೂ 2018

(ರಮೇಶ ಲ. ಜಾರಕಿಹೊಳಿ)
ಪೌರಾಡಳಿತ, ಬಂದರು ಮತ್ತು ಒಳನಾಡು
ಜಲಸಾರಿಗೆ ಸಚಿವರು